ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	423
ಸದಸ್ಯರ ಹೆಸರು	:	ಶ್ರೀ ಎಸ್.ರವಿ
ಉತ್ತರಿಸುವ ದಿನಾಂಕ	:	18-02-2022
ಉತ್ತರಿಸುವ ಸಚಿವರು	:	ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.

ಕ್ರಸಂ	ಪ್ರಶ್ನೆ	ಉತ್ತರ
ಅ)	ಸರ್ಕಾರದ ಆದೇಶ ಸಂ: ಸಕಇ 29 ಎಸ್‌ಎಲ್‌ಪಿ 2019, ದಿನಾಂಕ: 20.07.2019 ರಲ್ಲಿ ಡಾ:ಬಿ.ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮದಲ್ಲಿ ಬಳಕೆಯಾಗದಿರುವ ಉಳಿಕೆ ಅನುದಾನ ಒಟ್ಟು ರೂ.42101.00 ಲಕ್ಷಗಳನ್ನು ಸಮಾಜ ಕಲ್ಯಾಣ ಇಲಾಖೆ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆಯ ವಿವಿಧ ಕಾರ್ಯಕ್ರಮಗಳಿಗೆ ಉಪಯೋಗಿಸಲು ಹಂಚಿಕೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ.
ಆ)	ಹಾಗಿದ್ದಲ್ಲಿ, ಸದರಿ ಆದೇಶದಲ್ಲಿ ಪ್ರಗತಿ ಕಾಲೋನಿ ಯೋಜನೆ-ಪರಿಶಿಷ್ಟ ಜಾತಿಗಳ ಕಾಲೋನಿಗಳನ್ನು ಅಭಿವೃದ್ಧಿಪಡಿಸಲು ರೂ.15601.00ಲಕ್ಷ ಅನುದಾನವನ್ನು ಆಯುಕ್ತರು, ಸಮಾಜ ಕಲ್ಯಾಣ ಇಲಾಖೆಗೆ ಹಂಚಿಕೆ ಮಾಡಿದ್ದು, ಈ ಅನುದಾನವನ್ನು ಡಾ:ಬಿ.ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮವು ಬಿಡುಗಡೆ ಮಾಡಿದೆಯೇ;	ಮೇಲ್ಕಂಡ ಅನುದಾನದಲ್ಲಿ ಡಾ:ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ ವತಿಯಿಂದ ರೂ.8673.77 ಲಕ್ಷಗಳನ್ನು ಆರ್.ಟಿ.ಜಿ.ಎಸ್ ಮುಖಾಂತರ ವರ್ಗಾಯಿಸಲಾಗಿದ್ದು, ಬಾಕಿ ರೂ.6927.23 ಲಕ್ಷಗಳನ್ನು ಬಿಡುಗಡೆ ಮಾಡಿರುವುದಿಲ್ಲ.
ಇ)	ಮಾಡಿದ್ದಲ್ಲಿ, ಎಷ್ಟು ಅನುದಾನ ಬಿಡುಗಡೆ ಮಾಡಿದೆ ಹಾಗೂ ಬಿಡುಗಡೆಯಾಗದೆ ಬಾಕಿ ಉಳಿದಿರುವ ಅನುದಾನ ಎಷ್ಟು; (ದಾಖಲೆ ಸಹಿತ ವಿವರ ನೀಡುವುದು)	

ಈ)	ಬಿಡುಗಡೆಯಾಗದೇ ಬಾಕಿ ಉಳಿದಿದ್ದಲ್ಲಿ, ಇಲ್ಲಿಯವರೆಗೆ ಬಿಡುಗಡೆ ಮಾಡದಿರಲು ಕಾರಣಗಳೇನು; ಸದರಿ ಅನುದಾನದಲ್ಲಿ ಕೈಗೊಂಡಿರುವ ಕಾಮಗಾರಿಗಳಿಗೆ ಯಾವ ಕಾಲಮಿತಿಯೊಳಗೆ ಅನುದಾನ ಬಿಡುಗಡೆ ಮಾಡಲಾಗುವುದು? (ಸಂಪೂರ್ಣ ವಿವರ ನೀಡುವುದು)	ಡಾ॥ ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದಲ್ಲಿ ಲಭ್ಯವಿರುವ ಮೊತ್ತವನ್ನು ಸರ್ಕಾರದ ಯೋಜನೆಗಳಾದ ಗಂಗಾ ಕಲ್ಯಾಣ ಯೋಜನೆ, ಸ್ವಯಂ ಉದ್ಯೋಗ ಯೋಜನೆ, ಭೂ ಒಡೆತನ ಯೋಜನೆ, ಮೈಕ್ರೋ ಕ್ರೆಡಿಟ್ ಯೋಜನೆ, ಸಮೃದ್ಧಿ ಯೋಜನೆ, ಐರಾವತ ಯೋಜನೆ ಇನ್ನು ಮುಂತಾದ ಯೋಜನೆಗಳಿಗೆ ಕ್ರಿಯಾ ಯೋಜನೆ ರೂಪಿಸಿ ಅನುಷ್ಠಾನಗೊಳಿಸಲು ಕ್ರಮವಹಿಸಲಾಗಿರುತ್ತದೆ ಹಾಗೂ 2019-20ನೇ ಸಾಲಿನಲ್ಲಿ ಸರ್ಕಾರದ ಆಯವ್ಯಯದಲ್ಲಿ ನಿಗಮಕ್ಕೆ ಅನುದಾನ ಬಿಡುಗಡೆಯಾಗಿರುವುದಿಲ್ಲ. 2020-21ನೇ ಸಾಲಿನಲ್ಲಿ ರೂ.140.00 ಕೋಟಿಗೆ ಬದಲಾಗಿ ಕೇವಲ ರೂ.58.00 ಕೋಟಿ ಮಾತ್ರ ಬಿಡುಗಡೆಯಾಗಿರುತ್ತದೆ.

ಸಕಇ 141 ಎಸ್‌ಎಲ್‌ಪಿ 2022

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಹಾಗೂ
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು